ನಂಜನಗೂಡಿನಲ್ಲಿ ಆಸ್ಪತ್ರೆ ಕಟ್ಟಡದ ನಿರ್ಮಾಣ.

೧೩೬೧. ಶ್ರೀ ಡಿ. ಟಿ. ಜಯಕುಮಾರ್ (ನಂಜನಗೂಡು) ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಂಜನಗೂಡಿನ ಸಾರ್ವಜನಿಕ ಆಸ್ಪತ್ರೆಯು ೩೦ ಹಾಸಿಗೆಗಳ ಹೊಸ ಕಟ್ಟಡವನ್ನು ೬೦ ಹಾಸಿಗೆಗಳ ಕಟ್ಟಡವನ್ನಾಗಿ ಸರ್ಕಾರದವರು ಮಂಜೂರು ಮಾಡಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಅದರ ಒಟ್ಟು ಅಂದಾಜು ವೆಚ್ಚ ಎಷ್ಟು?

ಇ) ಇದುವರೆವಿಗೂ ಎಷ್ಟು ಹಣ ಬಿಡುಗಡೆಯಾಗಿದೆ?

ಈ) ಈ ಕಟ್ಟಡದ ಕೆಲಸ ಎಂದಿಗೆ ಪೂರ್ಣಗೊಳ್ಳುತ್ತದೆ?

ಶ್ರೀ. ಎಚ್. ಎಲ್. ತಿಮ್ಮೇಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ,

ಇ) ೩೦ ಹಾಸಿಗೆಗಳ ಕಟ್ಟಡವನ್ನು ಕಟ್ಟಲು ೫.೦೦ ಲಕ್ಷ ರೂಪಾಯಿಂಗಳನ್ನು ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಲಾಗಿದೆ.

ಈ) ಇನ್ನು ಎರಡು ವರ್ಷಗಳಲ್ಲಿ ಪೂರ್ಣಗೊಳ್ಳುವ ಸಾಧ್ಯತೆಯಿದೆ.

ದಾವಣಗೆರೆಯಲ್ಲಿನ ಆಸ್ಪತ್ರೆಯನ್ನು ವಿಸ್ತರಿಸುವುದು.

೧೩೭೦ ಶ್ರೀ ಪಂಪಾಪತಿ (ದಾವಣಗೆರೆ)—ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಾವಣಗೆರೆ ನಗರದಲ್ಲಿ ಸುಮಾರು ೨ ಲಕ್ಷಕ್ಕೂ ಹೆಚ್ಚು ಜನಸಂಖ್ಯೆಯಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಒಂದೇ ಸರ್ಕಾರಿ ಆಸ್ಪತ್ರೆಯಿರುವುದರಿಂದ ಜನರಿಗೆ ವೈದ್ಯಕೀಯ ಸೌಲಭ್ಯ ಒದಗಿಸಲು ಸಾಧ್ಯವಾಗದಿರುವುದು ಸರ್ಕಾರದದವರ ಗಮನಕ್ಕೆ ಬಂದಿದೆಯೇ?

ಇ) ಕೃಷ್ಣರಾಜೇಂದ್ರ ಮಾರುಕಟ್ಟೆ ಬಳಿ ಇರುವ ಹಳೆ ಆಸ್ಪತ್ರೆಯನ್ನು ಅಭಿವೃದ್ಧಿಪಡಿಸಲು ಸರ್ಕಾರದವರು ಉದ್ದೇಶಿಸಿದ್ದಾರೆಯೇ?

ಈ) ಹಾಗಿದ್ದಲ್ಲಿ ಅದನ್ನು ಸಕಲ ಸೌಕರ್ಯಗಳ ಆಸ್ಪತ್ರೆಯಾಗಿ ಸರ್ಕಾರದವರು ವಿಸ್ತರಿಸುವರೇ?

ಶ್ರೀ ಹೆಚ್. ಎಲ್. ತಿಮ್ಮೇಗೌಡ (ಆರೋಗ್ಯ ಸಚಿವರು).—

ಅ) ೧೯೮೧ನೇ ಜನಗಣತಿಯ ಪ್ರಕಾರ ಜನಸಂಖ್ಯೆ ೧,೯೬,೪೦೧ ಇದೆ.

ಆ) ಇಲ್ಲ.

ಇ) ಉದ್ದೇಶಿಸಲಾಗಿದೆ.

ಈ) ಹೌದು ಪರಿಶೀಲಿಸಲಾಗುವುದು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳ ಹುದ್ದೆಗಳು

೫೭೮. ಶ್ರೀ ಆರ್.ಎನ್. ನಾಯ್ಕ (ಭಟ್ಕಳ್).—ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಎಷ್ಟು ಕಡೆ, ವೈದ್ಯಾಧಿಕಾರಿಗಳ ಹುದ್ದೆ ಖಾಲಿಇವೆ?